**CC 2217/2022**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 2217/2022**

**ಸಿ ಡಬ್ಲೂ - 4**
**ಪಿ ಡಬ್ಲೂ - 3**

| | |
|---|---|
| **ಸಾಕ್ಷಿಯ ಹೆಸರು -** | **ಮಹೇಶ** |
| **ತಂದೆಯ ಹೆಸರು -** | **ಗೋಪಾಲಪ್ಪ** |
| **ವಯಸ್ಸು -** | **63 ವರ್ಷಗಳು** |
| **ಉದ್ಯೋಗ -** | **ಖಾಸಗಿ ಕೆಲಸ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 21-06-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಹೇಳಿಕೆಯನ್ನು ಪಡೆದಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಅರೋಪಿತರು ಯಾರೆಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 02-07-2022 ರಂದು ಶ್ರೀರಾಮ ಸೇನೆ, ಹೊಸಪೇಟೆ ಘಟಕದ ಸದಸ್ಯರುಗಳಾದ ಪ್ರಕರಣದ ಆರೋಪಿತರು ರಾಜಸ್ಥಾನದ ಉದಯಪುರದಲ್ಲಿ ನಡೆದಿರುವ ಕನ್ನಯ್ಯ ಲಾಲ್ ಎಂಬ ವ್ಯಕ್ತಿಯ ಕೊಲೆಯನ್ನು ಖಂಡಿಸಿ ಸಾರ್ವಜನಿಕ ರಸ್ತೆಯಲ್ಲಿ ಪ್ರತಿಭಟನೆ ಮೆರವಣಿಗೆ ಹಮ್ಮಿಕೊಂಡಿದ್ದರು ಅಂದರೆ ಸರಿಯಲ್ಲ.

ಬೆಳಿಗ್ಗೆ 09.00 ಗಂಟೆಗೆ ಪಾದಗಟ್ಟೆ ಆಂಜನೇಯ ದೇವಸ್ಥಾನದ ಮುಂದಿನ ರಸ್ತೆಯ ಮೇಲೆ 12 x 18 ಅಡಿ ಅಗಲದ ಸ್ಟೇಜ್ ನ್ನು ಹಾಕುವಂತೆ ನನಗೆ ಕೇಳಿಕೊಂಡಿದ್ದರು ಅಂದರೆ ಸರಿಯಲ್ಲ. ಆ ಸಂಬಂಧ ರೂ. 18,000/- ಬಿಲ್ ಆಗುತ್ತದೆ ಎಂದು ನಾನು ಹೇಳಿದ್ದೆ ಅಂದರೆ ಸರಿಯಲ್ಲ.

ದಿಃ 02-07-2022 ರಂದು ನಾನು ಬೆಳಿಗ್ಗೆ 07.00 ಗಂಟೆಗೆ ಎಲ್ಲಾ ಸಾಮಾನುಗಳನ್ನು ಹಾಕಿಕೊಂಡು ಅಲ್ಲಿಗೆ ಹೋದಾಗ ಆರೋಪಿತರು ಸ್ಥಳ ತೋರಿಸಿ ಸ್ಟೇಜ್ ಹಾಕಿಸಿದ್ದರು ಅಂದರೆ ಸರಿಯಲ್ಲ. ಅಲ್ಲಿ ಧ್ವನಿ ವರ್ದಕಗಳನ್ನು ಸಹ ಅಳವಡಿಸಿಕೊಂಡಿದ್ದರು ಅಂದರೆ ಸರಿಯಲ್ಲ. ಆ ರೀತಿ ಸ್ಟೇಜ್ ಮತ್ತು ಧ್ವನಿ ವರ್ದಕಗಳನ್ನು ಅಳವಡಿಸಿ ಸಂಚಾರಕ್ಕೆ ಅಡ್ಡಿ ಪಡಿಸಿ ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡಿದ್ದರು ಅಂದರೆ ಸರಿಯಲ್ಲ. ಪೋಲಿಸರು ಬಂದು ಸದರಿ ಸ್ಟೇಜ್ ನ್ನು ಮತ್ತು ಧ್ವನಿ ವರ್ದಕಗಳನ್ನು ಪರವಾನಗಿ ಪಡೆಯದೇ ಹಾಕಿದ್ದರಿಂದ ತೆರವುಗೊಳಿಸಿ ಸಂಚಾರಕ್ಕೆ ವ್ಯವಸ್ಥೆ ಮಾಡಿಕೊಟ್ಟಿದ್ದರು ಅಂದರೆ ಸರಿಯಲ್ಲ. ಈ ಬಗ್ಗೆ ನ್ಯಾಯಾಲಯದ ಮುಂದಿರುವ ಆರೋಪಿತರ ವಿರುದ್ಧ ಪ್ರಕರಣ ದಾಖಲಾಗಿತ್ತು ಅಂದರೆ ನನಗೆ ಗೊತ್ತಿಲ್ಲ.

ನಾನು ಈ ಬಗ್ಗೆ ದಿಃ 06-08-2022 ರಂದು ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿ ನೀಡಿಲ್ಲ ಎಂಬ ಹೇಳಿಕೆಯ ಭಾಗವನ್ನು ನಿಪಿಃ 4 ಎಂದು ಗುರುತಿಸಲಾಯಿತು.

ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಸಹ ನಿಪಿಃ 4 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**CC 2217/2022**

**ಸಿ ಡಬ್ಲೂ - 4**
**ಪಿ ಡಬ್ಲೂ - 3**

**ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎಸ್ ಹೆಚ್., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.